ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 24ನೇ ಫೆಬ್ರವರಿ, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ವಿತ್ತೀಯ ಕಾರ್ಯಕಲಾಪಗಳು

ಅ) **ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು)** ಅವರು 2013-14ನೇ ಸಾಲಿನ ಪೂರಕ ಅಂದಾಜುಗಳನ್ನು (ಎರಡನೇ ಕಂತು) ಮಂಡಿಸುವುದು.

ಆ) 2014-15ನೇ ಸಾಲಿನ ಆಯವ್ಯಯದ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	**ಹನ್ನೊಂದನೇ ಪಟ್ಟಿ**
ಆ) ದಿನಾಂಕ 18.02.2014ರ ಏಳನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ರಾಜೇಶ್ ಹೆಚ್. ಪಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 95(1904)	:	**ಅರಣ್ಯ ಸಚಿವರು**
ಇ) ದಿನಾಂಕ 18.02.2014ರ ಏಳನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 98(1642)	:	**ಕಾರ್ಮಿಕ ರಾಜ್ಯ ಸಚಿವರು**
ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	**ಹನ್ನೊಂದನೇ ಪಟ್ಟಿ**

3. ವರದಿಯನ್ನೊಪ್ಪಿಸುವುದು

ಶ್ರೀ ತನ್ವೀರ್ ಸೇಠ್ (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು 2013-14ನೇ ಸಾಲಿನ ಸರ್ಕಾರಿ ಭರವಸೆಗಳ ಸಮಿತಿಯ ಮೊದಲನೇ ವರದಿಯನ್ನು ಒಪ್ಪಿಸುವುದು.

ಪು.ತಿ.ನೋ.,.

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎಸ್. ಸುರೇಶ್‌ಕುಮಾರ್ ಅವರು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಆಡಳಿತ ಮಂಡಳಿಯವರು ಸರ್ಕಾರಿ ನೌಕರರ ವಯೋನಿವೃತ್ತಿಯನ್ನು ನಿಗದಿಗೊಳಿಸಿ ಹೊರಡಿಸಲಾದ ಆದೇಶವನ್ನು ಜಾರಿಗೊಳಿಸದಿರುವುದು ಹಾಗೂ ಸರ್ಕಾರದ ಅನುಮತಿ ಇಲ್ಲದೇ ಸುಪ್ರೀಂ ಕೋರ್ಟ್‌ನಲ್ಲಿ ದಾವೆಯನ್ನು ಹೂಡಿರುವ ಬಗ್ಗೆ ಮಾನ್ಯ ಸಣ್ಣ ಕೈಗಾರಿಕೆಗಳು, ಮುಜರಾಯಿ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಎನ್.ರಾಜಣ್ಣ ಮತ್ತು ಈ. ತುಕಾರಾಂ ಅವರುಗಳು ಬೆಂಗಳೂರು ಉತ್ತರ ತಾಲ್ಲೂಕು ಯಶವಂತಪುರ ಹೋಬಳಿ ಕೊಡಿಗೇಹಳ್ಳಿ ಗ್ರಾಮದ ಸರ್ವೆ ನಂ 31ರಲ್ಲಿನ ನಾಲ್ಕು ಎಕರೆ ಭೂಮಿಯನ್ನು ವಿಶೇಷ ಭೂಸ್ವಾಧೀನಾಧಿಕಾರಿ-2 ಇವರು ಭೂಸ್ವಾಧೀನ ಮಾಡಿ ಸಾರ್ವಜನಿಕ ಉದ್ದೇಶಕ್ಕೆ ಬಳಸದೆ ಇರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ, ಸಿ.ಎನ್.ಬಾಲಕೃಷ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಅವರುಗಳು ಹಾಸನ ಜಿಲ್ಲೆ ಹೊಳೆನರಸೀಪುರ ಟೌನ್ ರೈಲ್ವೆ ನಿಲ್ದಾಣದ ಎರಡು ಬದಿಗಳಲ್ಲಿ ಪ್ಲಾಟ್‌ಫಾರಂ ಮತ್ತು ಶೆಲ್ಟರ್ ಇಲ್ಲದಿರುವ ಬಗ್ಗೆ ಮಾನ್ಯ ಮೂಲ ಸೌಕರ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

4. ಶ್ರೀ ಮನೋಹರ ಹೆಚ್. ತಹಶೀಲ್ದಾರ್ ಅವರು ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೂಕಿನಲ್ಲಿ ಹೊಸ ಶಾಲಾ ಕೊಠಡಿಗಳನ್ನು ನಿರ್ಮಿಸುವ ಹಾಗೂ ಖಾಲಿ ಇರುವ 192 ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀ ತುಕಾರಾಂ ಈ ಅವರು ಮೆ: ಬ್ರಹ್ಮಿಣಿ ಸ್ಟೀಲ್ ಮತ್ತು ಮೆ:ಮಿತ್ತಲ್ ಸ್ಟೀಲ್ ಸಂಸ್ಥೆಗಳಿಗಾಗಿ ವಶಪಡಿಸಿಕೊಂಡಿರುವ ಬಳ್ಳಾರಿ ತಾಲ್ಲೂಕು ಸಂಡೂರು ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕುಡಿತಿನಿ, ವೇಣಿವೀಣಾಪುರ ಮತ್ತು ಕೊಳಗಲ್ ಗ್ರಾಮಗಳು ಸೇರಿದಂತೆ ಸುಮಾರು 11 ಸಾವಿರ ಎಕರೆ ಜಮೀನುಗಳಿಗೆ ದರ ನಿಗದಿಪಡಿಸುವಲ್ಲಿ ತಾರತಮ್ಯ ಉಂಟು ಮಾಡಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯವುದು.

6. ಶ್ರೀ ಗೋವಿಂದ ಎಂ. ಕಾರಜೋಳ ಅವರು ಸಂವಿಧಾನದ ಮೂಲಭೂತ ಹಕ್ಕುಗಳಲ್ಲಿ ಸಮಾನತೆಯ ಹಕ್ಕಿದ್ದರೂ ಅನೇಕ ಗ್ರಾಮಗಳಲ್ಲಿ ಇದುವರೆಗೂ ಅಸ್ಪೃಶ್ಯತೆಯ ಪದ್ಧತಿ ಜಾರಿಯಲ್ಲಿರುವುದರಿಂದ ಉಂಟಾಗಿರುವ ತೊಂದರೆಗಳ ಬಗ್ಗೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

7. ಶ್ರೀ ಹೆಚ್.ಆರ್. ಅಲಗೂರ (ರಾಜು) ಅವರು ರಾಜ್ಯದಲ್ಲಿ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣಕ್ಕೆ ಸಂಬಂಧಿಸಿದ ಕಂದಾಯ ನಿಯಮಾವಳಿಗಳ ನಿಯಮ 97(1)ಕ್ಕೆ ತಿದ್ದುಪಡಿ ತರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8. ಶ್ರೀ ಕೆ.ಬಿ.ಕೋಳಿವಾಡ್ ಅವರು ಹಾವೇರಿ ಜಿಲ್ಲೆ ರಾಣಿಬೆನ್ನೂರು ತಾಲ್ಲೂಕಿನ ವನ್ಯಜೀವಿ ವಲಯದ ಬೀಟುಗಳಾದ ಹಳಲಗೇರಿ, ಹನುಮಾಪುರ, ಹುಲ್ಲತ್ತಿ, ಮೇಡ್ಲೇರಿ, ಕುದರೇಹಾಳ, ಹುಣಸಿಕಟ್ಟೆ, ಬೀಟ್‌ಗಳಲ್ಲಿ ಪಿ.ಸಿ.ಪಿ. ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವಾಚ್‌ಮ್ಯಾನ್‌ಗಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ವೇತನವನ್ನು ಸರಿಯಾಗಿ ಪಾವತಿಸದೆ ವಂಚಿಸುತ್ತಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

9. ಶ್ರೀ ಎಲ್.ಎ. ರವಿ ಸುಬ್ರಮಣ್ಯ ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ 50ರ ಕಸ್ತೂರಿ ನಗರದ ರಾಜಾ ಕಾಲುವೆಗಳಲ್ಲಿ ತ್ಯಾಜ್ಯ ವಸ್ತುಗಳು ತುಂಬಿರುವುದರಿಂದ ಕಲುಷಿತ ನೀರು ಮುಂದೆ ಹರಿಯದೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

10. ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ, ಎಂ.ಟಿ. ಕೃಷ್ಣಪ್ಪ, ಹೆಚ್.ಡಿ. ರೇವಣ್ಣ, ಕೆ.ಎಂ. ಶಿವಲಿಂಗೇಗೌಡ ಮತ್ತು ಇತರರು ರಾಜ್ಯದಲ್ಲಿ ಬರಗಾಲ ಮತ್ತು ಕೊಳೆರೋಗದಿಂದ ತೆಂಗಿನ ಮತ್ತು ಅಡಿಕೆ ಮರಗಳು ನಾಶವಾಗಿರುವುದರಿಂದ ರೈತರಿಗೆ ಪ್ಯಾಕೇಜ್ ರೂಪದಲ್ಲಿ ಪಾವತಿಸಿರುವ ಪರಿಹಾರದ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

11. ಶ್ರೀ ಪಿ.ಆರ್. ಸುಧಾಕರ್ ಲಾಲ್ ಅವರು ಕೊರಟಗೆರೆ ಪಟ್ಟಣದಲ್ಲಿ ಶಾದಿಮಹಲ್ ಕಟ್ಟಡ ನಿರ್ಮಾಣದ ಕಾಮಗಾರಿಯು ಅನುದಾನ ಕೊರತೆಯಿಂದ ಪೂರ್ಣಗೊಳ್ಳದಿರುವುದರಿಂದ ಮುಸ್ಲಿಂ ಬಾಂಧವರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

12. ಶ್ರೀ ಡಿ.ಎನ್. ಜೀವರಾಜ್ ಅವರು ಮಲೆನಾಡು ಹಾಗೂ ಕರಾವಳಿ ಭಾಗದ ರೈತರ ಜೀವನಾಡಿಯಾದ ಅಡಿಕೆ ಬೆಳೆಗೆ ಹಳದಿ ರೋಗ ತಗಲಿರುವುದರಿಂದ ರೈತರಿಗೆ ನಷ್ಟ ಉಂಟಾಗಿರುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

13. ಶ್ರೀ ಗುರು ಪಾಟೀಲ್ ಶಿರವಾಳ ಅವರು ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ರೈತರಿಗೆ ಸರಿಯಾದ ಕೂಲಿಯನ್ನು ನೀಡುತ್ತಿಲ್ಲದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

14. ಶ್ರೀ ವಿ. ಸುನೀಲ್ ಕುಮಾರ್ ಅವರು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಯಾದ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆಯಡಿ ಕಾಮಗಾರಿಗಳನ್ನು ನಿರ್ವಹಿಸಿದ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡದಿರುವುದರಿಂದ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಕಾಮಗಾರಿಗಳು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

15. ಶ್ರೀಯುತರುಗಳಾದ ಹೆಚ್.ಎಸ್. ಪ್ರಕಾಶ್, ಸಿ.ಟಿ.ರವಿ, ಎನ್.ಚಲುವರಾಯಸ್ವಾಮಿ, ಹೆಚ್.ಕೆ.ಕುಮಾರ್‌ಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಮತ್ತು ವೈ.ಎಸ್.ವಿ.ದತ್ತ ಅವರುಗಳು ಹಾಸನ ನಗರಸಭೆಯ ಪೌರಾಯುಕ್ತರು ರಾಜ್ಯದ ವಿವಿಧ ನಗರಸಭೆಗಳಲ್ಲಿ ನಡೆಸಿರುವ ಅವ್ಯವಹಾರದ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಮಧು ಎಸ್. ಬಂಗಾರಪ್ಪ, ಎನ್.ಹೆಚ್.ಕೋನರೆಡ್ಡಿ ಬಿ.ಬಿ.ನಿಂಗಯ್ಯ, ಹಾಗೂ ಎಂ.ಟಿ.ಕೃಷ್ಣಪ್ಪ ಅವರುಗಳು ಅಡಿಕೆ ಆರೋಗ್ಯಕ್ಕೆ ಹಾನಿಕಾರಕ ಎಂದು ಕೇಂದ್ರ ಸರ್ಕಾರ ವರದಿ ಸಲ್ಲಿಸಿರುವ ಬಗ್ಗೆ ರಾಜ್ಯ ಸರ್ಕಾರವು ತೆಗೆದುಕೊಳ್ಳುವ ನಿರ್ಣಯದ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಎಸ್.ಆರ್. ವಿಶ್ವನಾಥ್, ಎಂ. ಕೃಷ್ಣಪ್ಪ ಮತ್ತು ರವಿಸುಬ್ರಮಣ್ಯ ಅವರುಗಳು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಅರ್ಕಾವತಿ ಬಡಾವಣೆ ನಿರ್ಮಾಣಕ್ಕಾಗಿ ವಶಪಡಿಸಿಕೊಳ್ಳಲಾದ ಜಮೀನುಗಳ ಪೈಕಿ ಕೆಲವು ಭೂಮಾಲೀಕರಿಗೆ ಪರಿಹಾರ ರೂಪದಲ್ಲಿ ನಿವೇಶನ ಹಂಚಿಕೆ ಮಾಡಲಾಗಿದ್ದರೂ ಕಾನೂನು ಬಾಹಿರವಾಗಿ ಆ ಜಮೀನುಗಳನ್ನು ಡಿ ನೋಟಿಫಿಕೇಷನ್ ಮಾಡಿ ಆದೇಶ ಹೊರಡಿಸಿರುವ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)